# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 149 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.08.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹಾಸ್ಟೆಲ್ ಕಟ್ಟಡಗಳ ದುರಸ್ತಿ ಕಾರ್ಯಕ್ಕೆ ಬೇಕಾಗಿರುವ ಹಣ ಎಷ್ಟು; ಪ್ರಸ್ತುತ ಸಾಲಿನಲ್ಲಿ ಸರ್ಕಾರದ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಹಾಸ್ಟೆಲ್ ವಾರು ಸಂಪೂರ್ಣ ವಿವರ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 2712 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳ ಪೈಕಿ, 1642 ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ ಪ್ರಸ್ತುತ 1383 ವಿದ್ಯಾರ್ಥಿನಿಲಯ ಕಟ್ಟಡಗಳಿಗೆ ದುರಸ್ತಿ ಅವಶ್ಯಕತೆಯಿರುತ್ತದೆ ಎಂದು ಜಿಲ್ಲೆಗಳಿಂದ ಮಾಹಿತಿ ಪಡೆಯಲಾಗಿರುತ್ತದೆ. ಅದರಂತೆ, ಸದರಿ ದುರಸ್ತಿ ಕಾಮಗಾರಿಗಳಿಗಾಗಿ ಒಟ್ಟು ರೂ.296.00 ಕೋಟಿಗಳ ಅನುದಾನದ ಅವಶ್ಯಕತೆಯಿರುತ್ತದೆ ಎಂದು ಅಂದಾಜಿಸಲಾಗಿದ್ದು, ರೂ.100.00 ಕೋಟಿಗಳನ್ನು ಈಗಾಗಲೇ ಬಿಡುಗಡೆ ಮಾಡಲಾಗಿರುತ್ತದೆ. ಇನ್ನು ರೂ.196.00 ಕೋಟಿ ಅವಶ್ಯಕತೆಯಿರುತ್ತದೆ.<br><br>2026-27ನೇ ಸಾಲಿನ ಆಯವ್ಯಯದಲ್ಲಿ ರಾಜ್ಯವಲಯ ಯೋಜನೆಯಡಿ ವಿದ್ಯಾರ್ಥಿನಿಲಯಗಳ ಕಟ್ಟಡ ದುರಸ್ತಿ ಕಾಮಗಾರಿಗಳಿಗಾಗಿ ರೂ.50.00 ಕೋಟಿಗಳು ಮತ್ತು ಜಿಲ್ಲಾವಲಯ ಯೋಜನೆಯಡಿ ರೂ.73.22 ಕೋಟಿಗಳು ಹೀಗೆ ಒಟ್ಟು ರೂ.123.22 ಕೋಟಿಗಳನ್ನು ಒದಗಿಸಲಾಗಿರುತ್ತದೆ. ಪ್ರಸ್ತುತ ದುರಸ್ತಿ ಕಾಮಗಾರಿ ಕೈಗೊಳ್ಳಬೇಕಾದ ವಿದ್ಯಾರ್ಥಿನಿಲಯಗಳನ್ನು ಗುರುತಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು ಆಡಳಿತಾತ್ಮಕ ಮಂಜೂರಾತಿ ನೀಡಿ ಅನುದಾನ ಬಿಡುಗಡೆ ಮಾಡಲಾಗುವುದು. |
| ಆ) | ರಾಜ್ಯದಲ್ಲಿ ಎಷ್ಟು ನೂತನ ಹಾಸ್ಟೆಲ್‌ಗಳ ಅವಶ್ಯಕತೆ ಇದೆ; ಪ್ರಸಕ್ತ ವರ್ಷದಲ್ಲಿ ಎಷ್ಟು ನೂತನ ಹಾಸ್ಟೆಲ್ ಕಟ್ಟಡ ಕಟ್ಟಲು ಸರ್ಕಾರ ಹಣ ಬಿಡುಗಡೆ ಮಾಡಿರುತ್ತದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಕಳೆದ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಸ್ವೀಕೃತವಾದ ಅರ್ಜಿಗಳಿಗೆ ಅನುಗುಣವಾಗಿ 100 ಸಂಖ್ಯಾಬಲದ ಅಂದಾಜು 1200 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಅವಶ್ಯಕತೆ ಇರುತ್ತದೆ.<br><br>2026-27ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 4225-03-277-2-06ರಡಿ ರೂ.330.00 ಕೋಟಿಗಳ ಅನುದಾನವನ್ನು ಒದಗಿಸಲಾಗಿರುತ್ತದೆ. |

| | | |
|---|---|---|
| | | 2026-27ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 207ರಲ್ಲಿ ಘೋಷಿಸಿರುವಂತೆ, ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ರೂ.5.00 ಕೋಟಿಗಳ ಘಟಕ ವೆಚ್ಚದಲ್ಲಿ 50 ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಕ್ರಮವಹಿಸಲಾಗಿದೆ. ಹಾಗೂ ಪ್ರಸಕ್ತ ಸಾಲಿನಲ್ಲಿ ಸದರಿ 50 ಹೊಸ ಕಟ್ಟಡಗಳ ನಿರ್ಮಾಣಕ್ಕಾಗಿ ರೂ.83.00 ಕೋಟಿಗಳನ್ನು ಒದಗಿಸಲಾಗಿರುತ್ತದೆ. |
| ಇ) | ರಾಜ್ಯದಲ್ಲಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಹೊಸ ಹಾಸ್ಟೆಲ್ ಕಟ್ಟಡಗಳನ್ನು ಕಟ್ಟಲು ಎಷ್ಟು ಕಡೆ ನಿವೇಶನ/ಸ್ಥಳಗಳನ್ನು ನೀಡಲಾಗಿದೆ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ 787 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಹಾಗೂ 283 ವಿದ್ಯಾರ್ಥಿನಿಲಯಗಳು ಇತರೆ ಇಲಾಖೆಗಳ ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.<br><br>ಸದರಿ ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು 424 ನಿವೇಶನಗಳನ್ನು ಪಡೆಯಲಾಗಿರುತ್ತದೆ. ಜಿಲ್ಲಾವಾರು ಮಾಹಿತಿಯನ್ನು **ಅನುಬಂಧದಲ್ಲಿ** ಒದಗಿಸಿದೆ. |

ಸಂಖ್ಯೆ:ಹಿಂವಕ **588** ಬಿಎಂಎಸ್ **2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು

ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಕೇಶವ ಪ್ರಸಾದ್ ಎಸ್(ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ:1[illegible], ಅನುಬಂಧ

ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಲಭ್ಯವಿರುವ ನಿವೇಶನಗಳ ಜಿಲ್ಲಾವಾರು ವಿವರ

| ಕ್ರ.ಸಂ | ಜಿಲ್ಲೆ | ಲಭ್ಯವಿರುವ ನಿವೇಶನಗಳ ಸಂಖ್ಯೆ |
|---|---|---|
| 1 | ಬಾಗಲಕೋಟೆ | 12 |
| 2 | ಬಳ್ಳಾರಿ | 0 |
| 3 | ಬೆಳಗಾವಿ | 19 |
| 4 | ಬೆಂಗಳೂರು.ಗ್ರಾ | 4 |
| 5 | ಬೆಂಗಳೂರು.ನ | 15 |
| 6 | ಬೆಂಗಳೂರು ದಕ್ಷಿಣ (ರಾಮನಗರ) | 4 |
| 7 | ಬೀದರ್ | 8 |
| 8 | ಚಾಮರಾಜನಗರ | 3 |
| 9 | ಚಿಕ್ಕಬಳ್ಳಾಪುರ | 1 |
| 10 | ಚಿಕ್ಕಮಗಳೂರು | 2 |
| 11 | ಚಿತ್ರದುರ್ಗ | 24 |
| 12 | ದಕ್ಷಿಣ ಕನ್ನಡ | 23 |
| 13 | ದಾವಣಗೆರೆ | 18 |
| 14 | ಧಾರವಾಡ | 27 |
| 15 | ಗದಗ | 16 |
| 16 | ಹಾಸನ | 10 |
| 17 | ಹಾವೇರಿ | 17 |
| 18 | ಕಲ್ಬುರ್ಗಿ | 15 |
| 19 | ಕೊಡಗು | 12 |
| 20 | ಕೋಲಾರ | 3 |
| 21 | ಕೊಪ್ಪಳ | 14 |
| 22 | ಮಂಡ್ಯ | 8 |
| 23 | ಮೈಸೂರು | 27 |
| 24 | ರಾಯಚೂರು | 12 |
| 25 | ಶಿವಮೊಗ್ಗ | 35 |
| 26 | ತುಮಕೂರು | 29 |

| ಕ್ರ.ಸಂ | ಜಿಲ್ಲೆ | ಲಭ್ಯವಿರುವ ನಿವೇಶನಗಳ ಸಂಖ್ಯೆ |
|---|---|---|
| 27 | ಉಡುಪಿ | 6 |
| 28 | ಉತ್ತರಕನ್ನಡ | 28 |
| 29 | ವಿಜಯನಗರ | 6 |
| 30 | ವಿಜಯಪುರ | 21 |
| 31 | ಯಾದಗಿರಿ | 5 |
| | ಒಟ್ಟು | 404 |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು